**ವಯೋಮಿತಿ:**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 28.01.2022ಕ್ಕೆ ಅಭ್ಯರ್ಥಿಗೆ ಕನಿಷ್ಠ 21 ವರ್ಷ ವಯಸ್ಸಾಗಿರಬೇಕು ಹಾಗೂ ಈ ಕೆಳಕಂಡ ಗರಿಷ್ಠ ವಯೋಮಿತಿ ಮೀರಿರಬಾರದು.

| | |
|---|---|
| **ಸಾಮಾನ್ಯ ವರ್ಗ** | **35 ವರ್ಷ** |
| **2ಎ,2ಬಿ,3ಎ,3ಬಿ** | **38 ವರ್ಷ** |
| **ಪ.ಜಾ/ಪ.ಪಂ/ಪ್ರ–1** | **40 ವರ್ಷ** |

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಎ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಬಿ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಸಿ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಡಿ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಇ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಎಫ್) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳೂ ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಜಿ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟು ಕೊಂಡು ಇಲಾಖೆಯು ಸೂಚಿಸಿದಾಗ ಅದರ ಮೂಲ | 10 ವರ್ಷಗಳು |

| | | |
|---|---|---|
| | ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | |
| (ಹೆಚ್) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಇಲಾಖೆಯು ಸೂಚಿಸಿದಾಗ ಅದರ ಮೂಲಕ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು. | 10 ವರ್ಷಗಳು |